# Bangalore
# Regional News
# 30.03.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ನಾಳೆಯಿಂದ ಹೋಟೆಲ್‌ಗಳಿಗೆ 17 ಸಾವಿರದ 500 ಗ್ಯಾಸ್ ಸಿಲಿಂಡರ್ ವಿತರಣೆ– ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಘೋಷಣೆ
2. ಉಪಚುನಾವಣೆ ಹಿನ್ನೆಲೆ; ಬಾಗಲಕೋಟೆ, ದಾವಣಗೆರೆ ದಕ್ಷಿಣ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳ ಪರ ರಾಜಕೀಯ ಮುಖಂಡರಿಂದ ಮತಯಾಚನೆ
3. ದೇಶದಾದ್ಯಂತ ಏಪ್ರಿಲ್ 1 ರಿಂದ 2027 ರ ಜನಗಣತಿಗೆ ಚಾಲನೆ; ಎರಡನೇ ಹಂತದಲ್ಲಿ ಜಾತಿಗಣತಿಗೆ ನಿರ್ಧಾರ
4. ಒಂದು ಸಾವಿರದ 650 ಕೋಟಿ ರೂಪಾಯಿ ಮೌಲ್ಯದ ಪೂರೈಕೆ ಆದೇಶ ಪಡೆದುಕೊಂಡ ಬೆಂಗಳೂರಿನ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್
5. ತೃತೀಯ ಭಾಷೆ ರದ್ದುಗೊಳಿಸಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ

***************

ನಾಳೆ ಬೆಂಗಳೂರು ನಗರದ ಹೋಟೆಲ್‌ಗಳಿಗೆ 17 ಸಾವಿರದ 500 ಹೆಚ್ಚುವರಿ ಗ್ಯಾಸ್ ಸಿಲಿಂಡರ್‌ಗಳನ್ನು ವಿತರಿಸಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಘೋಷಿಸಿದ್ದಾರೆ.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿತರಕರಿಗೆ ಸಿಲಿಂಡರ್‌ಗಳು ತಲುಪಲಿದ್ದು, ನಾಳೆಯಿಂದ ಹೋಟೆಲ್ ಮಾಲೀಕರಿಗೆ ವಿತರಣೆ ಆರಂಭವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಸಿಲಿಂಡರ್‌ಗಳ ಬಗ್ಗೆ ಯಾರು ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.
ನಗರ ಪ್ರದೇಶಗಳಲ್ಲಿ 25 ದಿನ ಕಳೆದ ಮೇಲೆ ಹಾಗೂ ಗ್ರಾಮೀಣ ಭಾಗದಲ್ಲಿ 45 ದಿನಕ್ಕೆ ಗೃಹ ಬಳಕೆ ಸಿಲಿಂಡರ್ ನೀಡಲು ಗ್ಯಾಸ್ ಏಜೆನ್ಸಿಗಳಿಗೆ ಸೂಚನೆ ನೀಡಿದ್ದಾರೆ.
ಗ್ಯಾಸ್ ಏಜೆನ್ಸಿಗಳು ಬುಕ್ ಮಾಡದಿದ್ದರೆ, ಆಯಾ ಕಂಪನಿಗಳಿಗೆ ಗ್ರಾಹಕರು ದೂರು ನೀಡುವಂತೆ ಸೂಚಿಸಿದ್ದಾರೆ.

***************

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಲ್ಲಿ ಉಪಚುನಾವಣೆ ಪ್ರಚಾರ ಬಿರುಸುಗೊಂಡಿದೆ. ಅಭ್ಯರ್ಥಿಗಳ ಪರ ಬಿಜೆಪಿ, ಕಾಂಗ್ರೆಸ್ ಪಕ್ಷದ ಮುಖಂಡರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ.

ಬಾಗಲಕೋಟೆಯ ಸುತಾರಗುಂಡಾರ, ನಾಯನೇಗಲಿ, ರಾಂಪುರ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರ ಬಿರುಸಿನ ಪ್ರಚಾರ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಉಮೇಶ್ ಮೇಟಿ ಅವರನ್ನು ಗೆಲ್ಲಿಸುವಂತೆ ಕರೆ ನೀಡಿದ್ದಾರೆ. ಬಾಗಲಕೋಟೆಗೆ ಮೆಡಿಕಲ್ ಕಾಲೇಜು ದಿವಂಗತ ಎಚ್.ವೈ.ಮೇಟಿ ಅವರ ಶ್ರಮದ ಫಲ ಎಂದು ತಿಳಿಸಿದ್ದಾರೆ.

ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ್ ಪರ ಪ್ರಚಾರ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವೀರಣ್ಣ ಚರಂತಿಮಠ್ ಅವರು ಭರ್ಜರಿ ಅಂತರದಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.
ಇದೇ ವೇಳೆ, ಸೋಲಿನ ಭೀತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಗಲಕೋಟೆಯಲ್ಲಿ ವಾಸ್ತವ್ಯ ಹೂಡಿದ್ದಾರೆ ಎಂದು ಅವರು ವ್ಯಂಗ್ಯವಾಡಿದ್ದಾರೆ.

***************

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನವಾಣೆ ಹಿನ್ನೆಲೆಯಲ್ಲಿ ಚುನಾವಣಾ ಅಕ್ರಮ ನಡೆಯದಂತೆ ಚುನಾವಣಾ ಆಯೋಗ ಹದ್ದಿನ ಕಣ್ಣಿಟ್ಟಿದೆ.
ಈವರೆಗೆ ಹಣ ಹಾಗೂ ಮದ್ಯ ವಶಪಡಿಸಿಕೊಂಡಿರುವ ಅವರು, 53 ಎಫ್‌ಐಆರ್ ದಾಖಲಿಸಿದ್ದಾರೆ. 14 ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

***************

ಏಪ್ರಿಲ್ 1 ರಿಂದ ದೇಶದಾದ್ಯಂತ ಜನಗಣತಿ ಆರಂಭವಾಗಲಿದೆ. ಇದು ಸ್ವಾತಂತ್ರ ನಂತರದ 8 ನೇ ಜನಗಣತಿಯಾಗಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಭಾರತದ ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತ ಮೃತ್ಯುಂಜಯ ಕುಮಾರ್ ನಾರಾಯಣ್ 2 ಹಂತಗಳಲ್ಲಿ ಜನಗಣತಿ ನಡೆಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.
ಮೊದಲ ಹಂತದಲ್ಲಿ ಏಪ್ರಿಲ್ 1 ರಿಂದ ಸೆಪ್ಟಂಬರ್ 30ರವರೆಗೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮನೆಗಳ ಪಟ್ಟಿ ಮತ್ತು ಸ್ವಯಂಗಣತಿ ನಡೆಯಲಿವೆ. ಎರಡನೇ ಹಂತದಲ್ಲಿ ಜಾತಿ ಗಣತಿ ಮಾಡಲಾಗುವುದು ಎಂದು ತಿಳಿಸಿದ್ದಾರೆ.

***************

ಕೇಂದ್ರ ಸರ್ಕಾರದ ನವರತ್ನ ಕಂಪನಿಗಳಲ್ಲೊಂದಾದ ರಕ್ಷಣಾ ಸಾರ್ವಜನಿಕ ವಲಯದ ಉದ್ಯಮ ಬೆಂಗಳೂರಿನ ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಒಂದು ಸಾವಿರದ 650 ಕೋಟಿ ರೂಪಾಯಿ ಮೌಲ್ಯದ ಪೂರೈಕೆ ಆದೇಶಗಳನ್ನು ಪಡೆದುಕೊಂಡಿದೆ.

ಪ್ರಮುಖವಾಗಿ ಉಪಗ್ರಹ ಸಂಹನ ಜಾಲ, ಎಲೆಕ್ಟ್ರಾನಿಕ್ ಯುದ್ಧ ವ್ಯವಸ್ಥೆಗಳು, ಸಂಹನ ಉಪಕರಣಗಳು, ಎವಿಯಾನಿಕ್ಸ್, ಸಾಫ್ಟ್‌ವೇರ್ ಪರಿಹಾರಗಳು, ಯುದ್ಧ ಸಾಮಾಗ್ರಿಗಳು, ಇವಿಎಂ, ಕಾರ್ಯತಂತ್ರದ ಘಟಕಗಳು, ನವೀಕರಣಗಳು, ಬಿಡಿ ಭಾಗಗಳು ಸೇರಿದಂತೆ ಇತ್ಯಾದಿ ಸೇವೆಗಳು ಸೇರಿವೆ.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಲೋಕಭವನದಲ್ಲಿ ತಂಗಲಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಏರ್ಪಡಿಸಲಾಗಿದೆ.
ಏಪ್ರಿಲ್ 1 ರಂದು ತುಮಕೂರಿನ ಸಿದ್ಧಗಂಗಾ ಮಠದಲ್ಲಿ ನಡೆಯಲಿರುವ ಶಿವಕುಮಾರ ಸ್ವಾಮೀಜಿಗಳ 119ನೇ ಜಯಂತಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.
ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದ್ದು, 15 ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ತುಮಕೂರು ನಗರದಲ್ಲಿ ವಾಹನ ಸಂಚಾರವನ್ನು ಮಾರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಯಾವುದೇ ಲೋಪವಾದಂತೆ ಕಾರ್ಯನಿರ್ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶುಭ್ ಕಲ್ಯಾಣ್ ಸೂಚಿಸಿದ್ದಾರೆ.

***************

ರಾಜ್ಯ ಸರ್ಕಾರದ ದುರಾಡಳಿತದಿಂದಾಗಿ ಕರ್ನಾಟಕ ಮಾದಕ ವಸ್ತುಗಳ ಕೇಂದ್ರವಾಗಿ ಮಾರ್ಪಟ್ಟಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಯುತ್ತಿರುವ ನಡುವೆಯೇ ತೃತೀಯ ಭಾಷೆಯನ್ನು ಸರ್ಕಾರ ರದ್ದುಗೊಳಿಸಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.
ಸರ್ಕಾರ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ದೂರಿದ್ದಾರೆ.

***************

ವಿದ್ಯಾರ್ಥಿಗಳಿಗೆ ಹಿಂದಿ ಸೇರಿದಂತೆ ಮೂರನೇ ಭಾಷೆಗೆ ಅಂಕಗಳನ್ನು ನೀಡದಿರುವ ಶಿಕ್ಷಣ ಇಲಾಖೆ ನಿರ್ಧಾರವನ್ನು ಬಿಜೆಪಿ ಖಂಡಿಸಿದೆ.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಶಾಸಕ ಸಿ.ಎನ್.ಅಶ್ವತ್ಥ್‌ನಾರಾಯಣ ರಾಷ್ಟ್ರ ನಿರ್ಮಾಣಕ್ಕೆ ಭಾಷೆಯನ್ನು ಸಂಪರ್ಕಿಸುವುದು ಅತ್ಯಗತ್ಯ ಎಂದು ಪ್ರತಿಪಾದಿಸಿದ್ದಾರೆ.

ಸರ್ಕಾರ, ಹಿಂದಿ ಭಾಷೆಯನ್ನು ವಿರೋಧಿಸುವ ಅಗತ್ಯವಿಲ್ಲ ಎಂದು ಹೇಳಿದ್ದಾರೆ.
ದ್ವಿಭಾಷ ನೀತಿಯತ್ತ ಪರಿಣಾಮಕಾರಿಯಾಗಿ ಬದಲಾಯಿಸುವ ಕ್ರಮವು ರಾಜಕೀಯ ಪ್ರೇರಿತವಾಗಿದ್ದು, ವಿದ್ಯಾರ್ಥಿಗಳ ಮೇಲೆ ಪರಿಣಾಮ ಬೀರಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ನಿರ್ಧಾರ ಸಂಪೂರ್ಣ ರಾಜಕೀಯ ಪ್ರೇರಿತ ಎಂದು ಆರೋಪಿಸಿದ್ದಾರೆ.

***************

ಬೇಸಿಗೆ ಹಿನ್ನೆಲೆಯಲ್ಲಿ ಜನರಿಗೆ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.
ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ನೀರಿನ ಸಂಗ್ರಹವಿದೆ ಎಂದು ತಿಳಿಸಿದ್ದಾರೆ.
ಅಗತ್ಯವಿದ್ದ ಕಡೆಗಳಲ್ಲಿ ರೈತರ ಬೋರ್‌ವೆಲ್‌ಗಳಿಂದಲೂ ಕುಡಿಯುವ ನೀರು ಪೂರೈಸಲು ಸೂಚನೆ ನೀಡಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

***************

ಶಾಸಕರು ಉಚಿತ ಐಪಿಎಲ್ ಟಿಕೆಟ್ ಕೇಳುವುದು ತಪ್ಪು ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸಕ್ತಿ ಇದ್ದವರು ಹಣ ನೀಡಿ, ಪಂದ್ಯ ನೋಡುವುದು ಉತ್ತಮ ಬೆಳವಣಿಗೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಮುಂದಿನ ದಿನಗಳಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಅಭಾವದ ಜೊತೆಗೆ ರಸಗೊಬ್ಬರ ಅಭಾವ ಸೃಷ್ಟಿಯಾಗಬಹುದು ಎಂದು ತಿಳಿಸಿದ್ದಾರೆ. ಇದೇ ವೇಳೆ ರಾಜ್ಯ ಸಕಾರದ ದ್ವಿಭಾಷಾ ನೀತಿ ತೀರ್ಮಾನವನ್ನು ಅವರು ಸ್ವಾಗತಿಸಿದ್ದಾರೆ.

***************

ಕರಾವಳಿ ಕರ್ನಾಟಕದ ಮೊದಲ ನ್ಯೂ ಜನರೇಶನ್ ಅಂಚೆ ಕಚೇರಿ ದಕ್ಷಿಣ ಕನ್ನಡ ಜಿಲ್ಲೆಯ ಸುರತ್ಕಲ್ ಎನ್‌ಐಟಿಕೆ ಕ್ಯಾಂಪಸ್‌ನಲ್ಲಿ ಇಂದು ಉದ್ಘಾಟನೆಗೊಂಡಿದೆ.
ಉದ್ಘಾಟನೆ ನೆರವೇರಿಸಿ ಮಾತನಾಡಿದ ಎನ್‌ಐಟಿಕೆ ಸುರತ್ಕಲ್ ಉಪನಿರ್ದೇಶಕ ಸುಭಾಷ್ ಸಿ ಯರ್‌ಗಲ್, ಆಧುನಿಕ ಸೌಲಭ್ಯಗಳುಳ್ಳ ಈ ಸೇವೆಯಿಂದಾಗಿ ವಿದ್ಯಾರ್ಥಿಗಳಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.
ಅಂಚೆ ಇಲಾಖೆ ಕರ್ನಾಟಕ ವಲಯ ಮಹಾ ಪ್ರಬಂಧಕ ಜೂಲಿಯಾ ಮೋಹಪಾತ್ರ ಮಾತನಾಡಿ, ಸುಮಾರು 170 ವರ್ಷದ ಪರಂಪರೆ ಹೊಂದಿರುವ ಭಾರತೀಯ ಅಂಚೆ ಇಲಾಖೆಯ ಸೇವೆಯನ್ನು ಇಂದಿನ ಡಿಜಿಟಲ್ ಪೀಳಿಗೆಯ ಜೀವನಶೈಲಿಗೆ ಹೊಂದಿಸುವ ಉದ್ದೇಶದಿಂದ ಎನ್-ಜೆನ್ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.
ಆಕಾಶವಾಣಿಯೊಂದಿಗೆ ಮಾತನಾಡಿದ ಮಂಗಳೂರು ಅಂಚೆ ವಿಭಾಗದ ಉಪ ಅಂಚೆ ಅಧೀಕ್ಷಕರಾದ ದಿನೇಶ್ ಪಿ, ನೂತನ ಎನ್ ಜೆನ್ ಅಂಚೆ ಕಚೇರಿಯು, ವಿದ್ಯಾರ್ಥಿಗಳ ಓದು, ಚರ್ಚೆ ಮತ್ತು ಸಂವಾದ ನಡೆಸುವ ಜೊತೆಗೆ ಅಗತ್ಯ ಅಂಚೆ ಹಾಗೂ ಆರ್ಥಿಕ ಸೇವೆಗಳನ್ನು ಸುಲಭವಾಗಿ ಪಡೆಯಲು ಅವಕಾಶ ನೀಡಲಿದೆ ಎಂದು ಮಾಹಿತಿ ನೀಡಿದ್ದಾರೆ.

***************

<u>ಸಂಕ್ಷಿಪ್ತ ಸುದ್ದಿ</u>

**1. ಧಾರವಾಡ ಜಿಲ್ಲೆ ಕಲಘಟಗಿ ತಾಲ್ಲೂಕಿನ ಮಾಚಾಪುರ ಗ್ರಾಮದಲ್ಲಿ ಸುರಿದ ಆಲಿಕಲ್ಲು ಮಳೆಯಿಂದ ಉಂಟಾದ ಹಾನಿಯನ್ನು ಇಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಭೇಟಿ ನೀಡಿ, ಪರಿಶೀಲಿಸಿದರು. ಇದೇ ವೇಳೆ, ಗ್ರಾಮಸ್ಥರೊಂದಿಗೆ ಚರ್ಚಿಸಿ, ಮಾಹಿತಿ ಪಡೆದುಕೊಂಡರು.**

*********ಮುಕ್ತಾಯ**********